ಅ) ತುಮಕೂರು ನಗರದ ಬಿ.ಹೆಚ್. ರಸ್ತೆಯಲ್ಲಿ ಕೆಲವರು ವಾಹನಗಳನ್ನು ರಿಪೇರಿ ಮಾಡುತ್ತಿರುವುದು ನಿಜವೇ?

ಆ) ಹಾಗಿದ್ದಲ್ಲಿ ಇದರಿಂದ ವಾಹನಕ್ಕೆ, ಸಾರ್ವಜನಿಕರಿಗೆ ಓಡಾಡಲು ತೊಂದರೆ ಆಗುವುದಿಲ್ಲವೇ?

ಇ) ಇವುಗಳನ್ನು ತೆರವು ಮಾಡಿಸಲು ಸರ್ಕಾರ ಕ್ರಮಕೈಗೊಳ್ಳಲಾಗುವುದೇ? ಹಾಗೂ ಎಂದಿನಿಂದ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು) :

ಅ) ಹೌದು.

ಆ) ಹೌದು.

ಇ) ಹೌದು.

ನಗರಸಭೆ ತುಮಕೂರು, ಸಂಚಾರಿ ಪೋಲಿಸ್ ಮತ್ತು ಲೋಕೋಪಯೋಗಿ ಇಲಾಖೆ ಜಂಟಿ ಕಾರ್ಯಾಚರಣೆ ಮಾಡಿ ಅಂಗಡಿಗಳನ್ನು ತೆಗೆದುಹಾಕಲು ಕ್ರಮ ತೆಗೆದುಕೊಂಡಿದ್ದಾರೆ.

ನಿಟ್ಟೂರಿನಲ್ಲಿ ಟ್ರಾಫಿಕ್ ಸ್ಟೇಷನ್ ತೆರೆಯುವುದು.

2766 - ಶ್ರೀ ಜಿ.ಎಸ್. ಶಿವನಂಜಪ್ಪ (ಗುಬ್ಬಿ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ನಿಟ್ಟೂರು ಸುತ್ತಮುತ್ತ ಹಾಗೂ ಬಿ.ಹೆಚ.ರಸ್ತೆಯಲ್ಲಿ 1989-90, 90-91ರಲ್ಲಿ ಎಷ್ಟು ಅಪಘಾತಗಳು ಸಂಭವಿಸಿರುತ್ತವೆ.

ಆ) ನಿಟ್ಟೂರಿನಲ್ಲಿ ಟ್ರಾಫಿಕ್ ಸ್ಟೇಷನ್ ಸ್ಥಾಪಿಸಲು ಶಾಸಕರು ಮತ್ತು ಸಾರ್ವಜನಿಕರು ಹಾಗೂ ಇಲಾಖೆಯವರು ಸರ್ಕಾರಕ್ಕೆ ಮನವಿ ಸಲ್ಲಿಸಿರುವುದು ನಿಜವೆ?

ಇ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕ್ರಮ ಕೈಗೊಂಡಿದೆಯೇ? ಇಲ್ಲದಿದ್ದಲ್ಲಿ ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಧರ್ಮಸಿಂಗ್ (ಗೃಹ ಸಚಿವರು) :

ಅ)

	1989-90	9-91
ಮರಣಾಂತಿಕ	5	8
ಸಾಮಾನ್ಯ	27	23

ಆ) ಶಾಸಕರಿಂದ ಇಲ್ಲ. ಆದರೆ ದಿನಾಂಕ: 18-12-90ರಂದು ನಿಟ್ಟೂರು ಮಂಡಲ ಪಂಚಾಯಿತಿ ಅಧ್ಯಕ್ಷರು ಮನವಿಯೊಂದನ್ನು ಕಳುಹಿಸಿದ್ದಾರೆ.

ಇ) ಈ ಮನವಿಯೂ ಸಹ ಸರ್ಕಾರದ ಪರಿಶೀಲನೆಯಲ್ಲಿದೆ. ಆಧ್ಯತೆ, ಅಗತ್ಯತೆ, ಹಾಗೂ ಆರ್ಥಿಕ ಸಂಪನ್ಮೂಲಗಳನ್ನುನುಸರಿಸಿ ಈ ವಿಷಯವನ್ನು ಪರಿಶೀಲಿಸಲಾಗುವುದು.

ಕರ್ನಾಟಕ ಲೋಕಸೇವಾ ಆಯೋಗದ ಉಪ ವಿಭಾಗಗಳು.

2635 - ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವ ಕಲ್ಯಾಣ) : ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಲೋಕಸೇವಾ ಆಯೋಗದ ವಿಭಾಗೀಯ ಕಛೇರಿಗಳನ್ನು ತೆರೆಯಲು ಸರ್ಕಾರವು ಉದ್ದೇಶಿಸಿದೆಯೇ?